ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 30–9–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **New Corporation Bank Branch Inauguration:**<br>**Mrs. K. Ratna Prabha, IAS., Additional Chief Secretary, Commerce and Industries Department, Government of Karnataka**<br><br>**24x7 e lobby:**<br><br>**Inauguration:**<br>**Shri V.P. Baligar, IAS., Chairman & Managing Director, Karnataka State Industrial & Infrastructure Development Corporation Ltd.,** | **1-10-2014 Wednesday at 10.00 A.M.** | **No. 49, Ground Floor, Khanija Bhavan, Race Course Road, Bangalore -560 001** |
| 2 | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆ - 2014.<br><br>ಉದ್ಘಾಟನೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ | 1–10–2014 ಬುಧವಾರ ಬೆಳಿಗ್ಗೆ 11–00 ಗಂಟೆಗೆ | ರವೀಂದ್ರ ಕಲಾಕ್ಷೇತ್ರ, ಬೆಂಗಳೂರು. |

| | | | |
|---|---|---|---|
| | **ಉಪಸ್ಥಿತರು:**<br><br>ಶ್ರೀ ಹೆಚ್.ಎಸ್. ದೊರೆಸ್ವಾಮಿ,<br>ಸ್ವಾತಂತ್ರ್ಯ ಹೋರಾಟಗಾರರು.<br><br>**ಪ್ರಶಸ್ತಿ ಪ್ರದಾನ:**<br><br>ಶ್ರೀಮತಿ ಉಮಾಶ್ರೀ,<br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು.<br><br>**ಅಧ್ಯಕ್ಷತೆ:**<br><br>ಶ್ರೀ ಆರ್. ವಿ. ದೇವರಾಜ್,<br>ಶಾಸಕರು,<br>ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರ | | |
| 2 | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ ಅವರು ಬೆಂಗಳೂರು ಕಂಟೋನ್ಮೆಂಟ್ ರೈಲ್ವೆ ನಿಲ್ದಾಣದಲ್ಲಿ ನಾಗಪುರದ ದೀಕ್ಷಾ ಭೂಮಿ ಸಮಾರಂಭಕ್ಕೆ ತೆರಳುತ್ತಿರುವ 750 ಪ್ರಯಾಣಿಕರಿಗೆ ಹಸಿರು ನಿಶಾನೆ ತೋರುವ ಕಾರ್ಯಕ್ರಮ | 1-10-2014<br>ಬುಧವಾರ<br>ಮಧ್ಯಾಹ್ನ<br>3-15 ಗಂಟೆಗೆ | ಕಂಟೋನ್ಮೆಂಟ್ ರೈಲ್ವೆ ನಿಲ್ದಾಣ ಬೆಂಗಳೂರು |

ನಿರ್ದೇಶಕರ ಪರವಾಗಿ

## ಮಹಾತ್ಮಗಾಂಧಿ ಸೇವಾ ಪ್ರಶಸ್ತಿಗೆ ಗಾಂಧೀವಾದಿ ಎಸ್.ಎನ್ ಸುಬ್ಬರಾವ್ ಆಯ್ಕೆ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಪ್ರಪ್ರಥಮ ಬಾರಿಗೆ ಸ್ಥಾಪಿಸಿರುವ ಮಹಾತ್ಮಗಾಂಧಿ ಸೇವಾ ಪ್ರಶಸ್ತಿಯನ್ನು ಮಧ್ಯಪ್ರದೇಶದಲ್ಲಿ ಚಂಬಲ್ ಕಣಿವೆಯ ಡಕಾಯಿತರ ಮನಪರಿವರ್ತನೆ ಮಾಡಿ ಮುಖ್ಯವಾಹಿನಿಗೆ ತಂದ ಹಿರಿಯ ಗಾಂಧೀವಾದಿ ಡಾ ಎಸ್. ಎನ್. ಸುಬ್ಬರಾವ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಮತ್ತು

ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಐದು ಲಕ್ಷ ರೂ ನಗದು ಒಳಗೊಂಡ ಈ ಪ್ರಶಸ್ತಿಯನ್ನು ಅಕ್ಟೋಬರ್ 2 ರಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ಪ್ರದಾನ ಮಾಡಲಿದ್ದಾರೆ.

ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ಡಾ ಹೊ. ಶ್ರೀನಿವಾಸಯ್ಯ, ಹಿರಿಯ ಪತ್ರಕರ್ತ ಶ್ರೀ ಜಿ. ಎನ್. ರಂಗನಾಥ ರಾವ್, ವಿಧಾನ ಪರಿಷತ್ತಿನ ಮಾಜಿ ಸದಸ್ಯ ಪ್ರೊ. ಎಜಾಜುದ್ದೀನ್, ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಶ್ರೀಮತಿ ಬಿ. ಟಿ. ಜಾಹ್ನವಿ, ವಾರ್ತಾ ಇಲಾಖೆಯ ನಿರ್ದೇಶಕರಾದ ಶ್ರೀ ಎನ್. ಆರ್. ವಿಶುಕುಮಾರ್, ಅವರನ್ನೊಳಗೊಂಡ ಸಮಿತಿ ಶ್ರೀ ಸುಬ್ಬರಾವ್ ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಿದೆ ಎಂದು ಅವರು ತಿಳಿಸಿದರು.

ಡಾ.ಎಸ್.ಎನ್ ಸುಬ್ಬರಾವ್ ಅವರು ಪಂಡಿತ್ ಜವಹರಲಾಲ್ ನೆಹರು, ಶ್ರೀ. ಕೆ. ಕಾಮರಾಜ್ ಅವರೊಡನೆ ಸಕ್ರಿಯವಾಗಿ ಸ್ವಾತಂತ್ರ ಸಂಗ್ರಾಮದಲ್ಲಿ ಭಾಗವಹಿಸಿದ್ದರು. ಹಿರಿಯ ಸ್ವಾತಂತ್ರ ಹೋರಾಟಗಾರರಾದ ಡಾ.ಎನ್.ಎಸ್ ಹರ್ಡೀಕರ್ ಅವರ ಸಂಪರ್ಕಕ್ಕೆ ಸಹ ಬಂದಿದ್ದರು. ಜೀವನದಲ್ಲಿ ಗಾಂಧೀಜಿಯವರ ಮೌಲ್ಯಗಳನ್ನು ಅಳವಡಿಸಿಕೊಂಡಿದ್ದರು. ಚಂಬಲ್ ಕಣಿವೆಯಲ್ಲಿ 600ಕ್ಕೂ ಹೆಚ್ಚು ಡಕಾಯಿತರ ಮನಪರಿವರ್ತನೆಯಿಂದ ಜೀವನದ ಮುಖ್ಯವಾಹಿನಿಗೆ ತಂದ ಹರಿಕಾರರು. ಡಕಾಯಿತರ ಪುನರ್ವಸತಿಗೆಂದೇ ಮಧ್ಯಪ್ರದೇಶದ ಮೊರೆನಾ ಜಿಲ್ಲೆಯ ಜೌರಾದಲ್ಲಿ ಅವರು ಗಾಂಧಿ ಸೇವಾಶ್ರಮ ಸ್ಥಾಪಿಸಿದರು. ಗುಜರಾತ್ ಸೇರಿದಂತೆ ವಿಶ್ವದ ಹಲವಡೆ ಐಕ್ಯತೆ ಸಮಾವೇಶದಲ್ಲಿ ಭಾಗವಹಿಸಿದ್ದರು. ಇವರು ರಾಜೀವ್‌ಗಾಂಧಿ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ, ಮಹಾತ್ಮ ಗಾಂಧಿ ಪುರಸ್ಕಾರ್ ಮುಂತಾದ ಪ್ರಶಸ್ತಿಗಳನ್ನು ಪಡೆದಿದ್ದಾರೆ ಎಂದರು

ಗಾಂಧಿಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮಗಾಂಧೀ ಸೇವಾ ಪ್ರಶಸ್ತಿ - ಕರ್ನಾಟಕ ಇದರ ಪ್ರದಾನ ಸಮಾರಂಭ ಹಾಗೂ ವಿಶೇಷ ಪ್ರಕಟಣೆಗಳ ಬಿಡುಗಡೆ, ' ಕುಂಚದಲ್ಲಿ ಬಾಪು ನೆನಪು' - ಕಲಾಕೃತಿಗಳು ಹಾಗೂ "ಗಾಂಧೀ ಬಂದ' ನಾಟಕ ಪ್ರದರ್ಶನವನ್ನು ಅಕ್ಟೋಬರ್ 2 ರಂದು ಸಂಜೆ 5.30 ಗಂಟೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗಿದೆ. ಅಲ್ಲದೆ ಗಾಂಧಿ ಜಯಂತಿಯನ್ನು ಎಲ್ಲಾ ಜಿಲ್ಲಾ ಕೇಂದ್ರದಲ್ಲೂ ಅಂದು ಬೆಳಿಗ್ಗೆ 9 ಗಂಟೆಗೆ ಏಕಕಾಲದಲ್ಲಿ ಆಚರಿಸಲಾಗುತ್ತದೆ. 'ನಮ್ಮ ಗಾಂಧಿ ತಾತ' ಗ್ರಾಂಡ್ ಪಾ ಗಾಂಧಿ' ಕರ್ನಾಟಕದಲ್ಲಿ ಮಹಾತ್ಮ ಗಾಂಧಿ ಹೆಜ್ಜೆಗಳು, 'ಗಾಂಧಿ ಜೀವನ ಸಂದೇಶ' ಎಂಬ ಕಿರುಪುಸ್ತಕಗಳನ್ನು ಇಲಾಖೆ ಪ್ರಕಟಿಸಿದ್ದು, ಇದನ್ನು ಆಯಾ ಜಿಲ್ಲೆಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಬಿಡುಗಡೆ ಮಾಡಲಾಗುವುದೆಂದರು

ದೆಹಲಿಯ ಕೇಂದ್ರ ಗಾಂಧಿ ಸ್ಮಾರಕ ನಿರ್ಮಿಸಿರುವ ಸಾಕ್ಷ್ಯ ಚಿತ್ರದ ಕನ್ನಡ ಅವತಾರಣೆ ಸಿಡಿಗಳನ್ನು ಸಹ ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಾಗುವುದು. ಮಹಾತ್ಮ ಗಾಂಧಿಯವರ ಚಿತ್ರಗಳನ್ನು ಚಿತ್ರಿಸಲು ಕುಪ್ಪಳಿಯಲ್ಲಿ ನಡೆದ ' ಕುಂಚದಲ್ಲಿ ಬಾಪು ನೆನಪು' ಕಲಾ ಶಿಬಿರದಲ್ಲಿ ಬಿಡಿಸಿದ ಗಾಂಧೀಜಿಯವರ ಕುರಿತು ಕಲಾಚಿತ್ರಗಳನ್ನು ಈ ಸಂದರ್ಭದಲ್ಲಿ ಪ್ರದರ್ಶಿಸಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ವಾರ್ತಾ ಇಲಾಖೆಯ ನಿರ್ದೇಶಕರಾದ ಶ್ರೀ ಎನ್. ಆರ್. ವಿಶುಕುಮಾರ್, ವಾರ್ತಾ ಸಚಿವರ ಆಪ್ತ ಕಾರ್ಯದರ್ಶಿಗಳಾದ ಶ್ರೀ ಅಜೀಜ್ ಅಹ್ಮದ್, –ಮುಂತಾದವರು ಉಪಸ್ಥಿತರಿದ್ದರು.
ಕವನ

**ಛಾಯಾಶೀಷಿಕೆ:**

DSC 0180, DSC 0182

ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಜ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಖಾತೆ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಮಹಾತ್ಮಗಾಂಧಿ ಸೇವಾ ಪ್ರಶಸ್ತಿ ಕುರಿತಂತೆ ದಿನಾಂಕ 30–9–2014 ರಂದು ವಾರ್ತಾ ಇಲಾಖೆಯಲ್ಲಿ ನಡೆಸಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಿರುವುದು.

DSC 0260, DSC 0276

ಇಂಧನ ಸಚಿವರಾದ ಶ್ರೀ ಡಿ.ಕೆ. ಶಿವಕುಮಾರ್ ಅವರು ಇಂದು ದೊಡ್ಡಬಳ್ಳಾಪುರ ತಾಲ್ಲೂಕಿನ ಕನಸವಾಡಿ ಗ್ರಾಮಕ್ಕೆ ಭೇಟಿ ನೀಡಿ ಗಣಪತಿ ವಿಸರ್ಜನೆ ಸಂದರ್ಭದಲ್ಲಿ ವಾಹನಕ್ಕೆ ವಿದ್ಯುತ್ ಸ್ಪರ್ಶವಾಗಿ 5 ಮಂದಿ ಅಸುನೀಗಿದ 5 ವ್ಯಕ್ತಿಗಳ ಕುಟುಂಬದವರಿಗೆ ತಲಾ 2.00 ಲಕ್ಷ ರೂ.ಗಳ ಚೆಕ್ ವಿತರಿಸಿ ಸಾಂತ್ವನ ನೀಡಿದರು. ಚಿತ್ರದಲ್ಲಿ ದೊಡ್ಡಬಳ್ಳಾಪುರ ಶಾಸಕರಾದ ಶ್ರೀ ವೆಂಕಟರಮಣಯ್ಯ ಅವರನ್ನು ಕಾಣಬಹುದು.

The Minister for Energy Shri D.K. Shivakumar visited Kanasavadi village in Doddaballapur Taluk in Bangalore Rural District this afternoon and handed over a cheque of Rs. 2.00 lakh each to the familes of five victims who were electricuted in the village recently.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗದ ದಿನಾಂಕ : 09–01–2013 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಔಷಧ ನಿಯಂತ್ರಣ ಇಲಾಖೆಯ ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯದಲ್ಲಿನ

ಸಹಾಯಕ ಪ್ರಾಧ್ಯಾಪಕರು (ಪಾರ್ಮಾಸ್ಯುಟಿಕಲ್) 01 ಹುದ್ದೆಯ ಮತ್ತು ದಿನಾಂಕ 01–06–2013 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಹಾಯಕ ನಿರ್ದೇಶಕರು (ದೈಹಿಕ ಶಿಕ್ಷಣ ಮತ್ತು ಕ್ರೀಡೆ) 03 ಬ್ಯಾಕ್‌ಲಾಗ್ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ 27–09–2014 ರಂದು ಆಯೋಗದ ಅಂತರ್ಜಾಲ "http://kpsc.kar.nic.in" ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಆಪೇಕ್ಷಿಸುವ ಅಭ್ಯರ್ಥಿಗಳು ಈ ಆಯ್ಕೆಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ 15 ದಿವಸದೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು - 560 001 ಇವರಿಗೆ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.
ಕವನ:ಜಿಪಿಆರ್.

## ನೇಮಕ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ, ಪ್ರಾಧಿಕಾರದ ಕಾರ್ಯದರ್ಶಿ ಹುದ್ದೆಗೆ ಶ್ರೀ ಮಂಜುನಾಥ ಪಾಟೀಲ್, ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ (ಆಡಳಿತ ಕನ್ನಡ) ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧಿಕ ಪ್ರಭಾರದಲ್ಲಿ ನೇಮಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ ಅವರು ಆದೇಶ ಹೊರಡಿಸಿದ್ದಾರೆ.

ಕವನ:ಜಿಪಿಆರ್.

## ಎಲೆಕ್ಟ್ರಾನಿಕ್ ಸಿಟಿಯಲ್ಲಿ ಸಾರಿಗೆ ಅದಾಲತ್

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಎಲೆಕ್ಟ್ರಾನಿಕ್ ಸಿಟಿ, ಬಿ.ಟಿ.ಎಂ. 4 ನೇ ಹಂತ, ಎರಡನೇ ಬ್ಲಾಕ್ ದೇವರಚಿಕ್ಕನಹಳ್ಳಿ ಬಸ್‌ಸ್ಟಾಂಡ್ ಹತ್ತಿರ, ಬೆಂಗಳೂರು - 560 076 ಇಲ್ಲಿರುವ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ದಿನಾಂಕ 6–10–2014 ರಂದು ಮಧ್ಯಾಹ್ನ 3–00 ಗಂಟೆಗೆ ಸಾರಿಗೆ ಅದಾಲತ್ ನಡೆಸಲಾಗುವುದು.

ಈ ಕಚೇರಿಯ ವ್ಯಾಪ್ತಿಯ ಸಾರ್ವಜನಿಕರ ಸಾರಿಗೆ ಇಲಾಖೆಗೆ ಸಂಬಂಧಿಸಿದ ಕುಂದು ಕೊರತೆಗಳನ್ನು ಆಲಿಸಲಾಗುವುದು. ಆದ್ದರಿಂದ ಸಾರ್ವಜನಿಕರು ತಮ್ಮ ಕುಂದುಕೊರತೆಗಳ ಬಗ್ಗೆ ಮನವಿಯನ್ನು ಸಲ್ಲಿಸಬಹುದಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕವನ:ಜಿಪಿಆರ್.

## ವೇಳಾಪಟ್ಟಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಭೂಮಾಪಾಕರ ಹುದ್ದೆಗೆ ಆಯ್ಕೆಯಾಗಿ ವೃತ್ತಿ ಬುನಾದಿ ತರಬೇತಿಯ ಅಂತಿಮ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ನೌಕರರುಗಳಿಗೆ ಸೈದ್ಧಾಂತಕ ಮತ್ತು ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ವೇಳಾಪಟ್ಟಿಯನ್ನು ಇಲಾಖಾ ವೆಬ್‌ಸೈಟ್ ವಿಳಾಸವಾದ www.bhoomi.karnataka.gov.in/surveyorrecruitment ರಲ್ಲಿ ಪ್ರಚುರಪಡಿಸಲಾಗಿದೆ ಎಂದು ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ದಾಖಲೆಗಳು, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕವನ:ಜಿಪಿಆರ್.

## ಅಬಕಾರಿ ಉಪನಿರೀಕ್ಷಕರ ಹುದ್ದೆ – ನೇಮಕಾತಿ ಕುರಿತಂತೆ ಪರಿಶೀಲನೆಗೆ ದಿನಾಂಕ ನಿಗದಿ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2012 ನೇ ಸಾಲಿನ ಅಬಕಾರಿ ಉಪ ನಿರೀಕ್ಷಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:2 ರ ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮೂಲಕ ದಾಖಲೆಗಳ ಪರಿಶೀಲನೆಯನ್ನು ದಿನಾಂಕ 13-10-2014 ಮತ್ತು 14-10-2014 ರಂದು ನಿಗದಿಪಡಿಸಿದ್ದು, ಸೂಚನಾ ಪತ್ರಗಳನ್ನು ಕಳೂಹಿಸಲಾಗಿರುತ್ತದೆ. ಸೂಚನಾ ಪತ್ರ ತಲುಪದೇ ಇರುವ ಅರ್ಹ ಅಭ್ಯರ್ಥಿಗಳೂ ಆಯೋಗದ ವೆಬ್‌ಸೈಟ್ http://kpsc.kar.nic.in.home page ನಲ್ಲಿ ಪ್ರಕಟಿಸಿರುವ ಅರ್ಹತಾಪಟ್ಟಿಯಲ್ಲಿನ ತಮ್ಮ ಹೆಸರು, ನೋಂದಣಿ ಸಂಖ್ಯೆ ಹಾಗೂ ಜನ್ಮ ದಿನಾಂಗಳನ್ನು ಖಚಿತಪಡಿಸಿಕೊಂದು ದಿನಾಂಕ 10-10-2014 ಒಳಗಾಗಿ ಕರ್ನಾಟಕ ಲೋಕಸೇವಾ ಆಯೋಗದ ಕೇಂದ್ರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಕವನ:ಜಿಪಿಆರ್.

## ಕಾಗೋಡು ಚಳುವಳಿಯ ರೂವಾರಿ ಗಣಪತಿಯಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಕಾಗೋಡು ಚಳುವಳಿಯ ಪ್ರಮುಖ ರೂವಾರಿ ಗಣಪತಿಯಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಜೈಲು ಶಿಕ್ಷೆಯನ್ನು ಅನುಭವಿಸಿದ ಶ್ರೀ ಗಣಪತಿಯಪ್ಪ ಅವರು ಕಾಗೋಡುವಿನಲ್ಲಿ ಗೇಣಿದಾರ ರೈತರ ಪರವಾಗಿ ನಡೆಸಿದ ಹೋರಾಟ ಅಂತಿಮವಾಗಿ ರಾಜ್ಯದಲ್ಲಿ ಭೂ ಸುಧಾರಣಾ ಕಾಯ್ದೆ ತರಲು ಪ್ರೇರಕವಾಯಿತು ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

## ಮುಖ್ಯಮಂತ್ರಿ ಅವರಿಂದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರ ಭೇಟಿ

**ನವದೆಹಲಿ ಸೆಪ್ಟೆಂಬರ್ 30, (ಕರ್ನಾಟಕ ವಾರ್ತೆ)**

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಭಾರತ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶ ಶ್ರೀ ಹೆಚ್.ಎಲ್. ದತ್ತು ಅವರನ್ನು ಸೌಹಾರ್ದ ಭೇಟಿ ಮಾಡಿದರು.

---------------------------------------